**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ-OI ಮತ್ತು ಇತರೆ ಯೋಜನೆಗಳಡಿ ನರೇಗಾ ಯೋಜನೆಯ ನೀರು ಸಂರಕ್ಷಣಾ ಮತ್ತು ಅಂತರ್‌ಜಲ ಹೆಚ್ಚಿಸುವ ಇಂಗುಗುಂಡಿ ಕಾಮಗಾರಿಗಳನ್ನು ಒಗ್ಗೂಡಿಸಿ ಅನುಷ್ಠಾನಗೊಳಿಸಲು ಅನುದಾನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ: 1. ಕೇಂದ್ರ ಸರ್ಕಾರದ ಕೃಷಿ ಮತ್ತು ರೈತರ ಕಲ್ಯಾಣ ಮಂತ್ರಾಲಯದ ಅಧೀನ ಕಾರ್ಯದರ್ಶಿಯವರ ಪತ್ರದ ಸಂಖ್ಯೆ: 19-8/2015-RFS-III ದಿನಾಂಕ: 18-09-2015

2. ಸರ್ಕಾರದ ಆದೇಶ ಸಂಖ್ಯೆ ಕೃಇ. 243 ಎ.ಎಂ.ವಿರ್ 2015 ಬೆಂಗಳೂರು ದಿನಾಂಕ: 20-10-2015.

3. ಸರ್ಕಾರದ ಆದೇಶ ಸಂಖ್ಯೆ: ಆಇ 106 ಬಿಆರ್‌ಎಸ್ 2015 ದಿನಾಂಕ: 01-02-2016.

4. ದಿನಾಂಕ: 25-05-2016 ರಂದು ಮಾನ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿಗಳು.

5. ದಿನಾಂಕ: 27-05-2016 ರಂದು ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿಗಳು

6. ದಿನಾಂಕ: 31-05-2016 ರಂದು ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿಗಳು.

7. ದಿನಾಂಕ: 21-06-2016 ರಂದು ಮಾನ್ಯ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿಗಳು.

8. ದಿನಾಂಕ: 24-08-2016 ರಂದು ಸರ್ಕಾರದ ಕಾರ್ಯದರ್ಶಿಗಳು ಕೃಷಿ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿಗಳು.

~~~~~~

***ಪ್ರಸ್ತಾವನೆ***

ಕೇಂದ್ರ ಸರ್ಕಾರದ ಕೃಷಿ ಮತ್ತು ರೈತರ ಕಲ್ಯಾಣ ಮಂತ್ರಾಲಯವು ಕೇಂದ್ರ ಅಂತರ್‌ಜಲ ಮಂಡಳಿಯವರು ಗುರುತಿಸಿರುವ ಅತಿ ಹಿಂದುಳಿದ ತಾಲ್ಲೂಕುಗಳಲ್ಲಿ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ-OI ಇತರೆ ಮಧ್ಯಸ್ಥಿಕೆಯ ಯೋಜನೆಗಳಡಿ ನರೇಗಾ ಯೋಜನೆಯ ನೀರು ಸಂರಕ್ಷಣೆ ಮತ್ತು ಅಂತರ್‌ಜಲ ಹೆಚ್ಚಿಸುವ ಕಾಮಗಾರಿಗಳ ಸಾಮಗ್ರಿಗಳ ವೆಚ್ಚಕ್ಕೆ ಪೂರಕವಾಗಿ ಕೇಂದ್ರ ಸರ್ಕಾರವು ತನ್ನ ಪಾಲಿನ ಅನುದಾನವನ್ನು ಸಾಮಾನ್ಯ ವರ್ಗಕ್ಕೆ ರೂ. 5495.00 ಲಕ್ಷಗಳು SCSP ವರ್ಗಕ್ಕೆ ರೂ. 1238.00 ಲಕ್ಷಗಳು ಮತ್ತು TSP ವರ್ಗಕ್ಕೆ ರೂ. 507.00 ಲಕ್ಷಗಳು ಹೀಗಾಗಿ ಒಟ್ಟು ರೂ. 7240.00 ಲಕ್ಷಗಳನ್ನು ಷರತ್ತುಗಳಿಗೆ ಒಳಪಟ್ಟು ಬಿಡುಗಡೆ ಮಾಡಿರುತ್ತದೆ. ಕಾಮಗಾರಿಗಳ ಚಟುವಟಿಕೆಗಳನ್ನು ಕೇಂದ್ರ ಸರ್ಕಾರವು ಸೂಚಿಸಿರುವ 7 ಜಿಲ್ಲೆಗಳ 18 ತಾಲ್ಲೂಕುಗಳಲ್ಲಿ ರಾಜ್ಯ ಸರ್ಕಾರದ ಗ್ರಾಮೀಣಾಭಿವೃದ್ಧಿ ಇಲಾಖೆಯ ಮೂಲಕ ಅನುಷ್ಠಾನಗೊಳಿಸತಕ್ಕದ್ದು ಎಂದು ಆದೇಶಿಸಿರುತ್ತದೆ. ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ-OIಯನ್ನು ನರೇಗಾ ಯೋಜನೆಯೊಂದಿಗೆ ಒಗ್ಗೂಡಿಸುವಿಕೆಯ ಮೂಲಕ ಅನುಷ್ಠಾನಗೊಳಿಸುವ ಕಾರ್ಯಕ್ರಮಕ್ಕೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಸಮಾನವಾಗಿ ಶೇಕಡಾ 50:50ರ ಅನುಪಾತದಲ್ಲಿ ಹಂಚಿಕೊಂಡು ವೆಚ್ಚ ಭರಿಸಲು ಆದೇಶಿಸಿರುತ್ತದೆ. ರಾಜ್ಯ ಸರ್ಕಾರವು ಕೂಡ ತನ್ನ ಪಾಲನ್ನು ಮೇಲೆ ಓದಲಾದ ಕ್ರಮ ಸಂಖ್ಯೆ:(3)ರಲ್ಲಿ ಕೇಂದ್ರ ಸರ್ಕಾರವು ಬಿಡುಗಡೆ ಮಾಡಿರುವ ಅನುದಾನವು ಸೇರಿದಂತೆ ತನ್ನ ಪಾಲನ್ನು ಸೇರಿಸಿ ಒಟ್ಟು ರೂ. 14,480.00 ಲಕ್ಷಗಳನ್ನು ಕಾರ್ಯಕ್ರಮದ ಅನುಷ್ಠಾನಕ್ಕೆ ಬಿಡುಗಡೆ ಮಾಡಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ:(2)ರನ್ವಯ ಸರ್ಕಾರದ ಕೃಷಿ ಇಲಾಖೆಯವರು ಆದೇಶದ ಸಂಖ್ಯೆ: ಎ.ಜಿ.ಡಿ 245 ಎ.ಎಮ್.ಎಲ್ 2015, ಬೆಂಗಳೂರು ದಿನಾಂಕ: 20-10-2015ರಲ್ಲಿ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ
~~~~~~

ಯೋಜನೆ-OIಯ ಅಂತಿಮ ಫಲಶೃತಿಯು ಸಮರ್ಥವಾಗಿ ಫಲಾಕಾರಿಯಾಗಲು ಹಾಗೂ ಪ್ರತಿ ಕೃಷಿ ಕ್ಷೇತ್ರದಲ್ಲಿ ನೀರನ್ನು ಒದಗಿಸಿ ಕೃಷಿ ಉತ್ಪಾದನೆ ಮತ್ತು ಉತ್ಪಾದಕತೆಯನ್ನು ಹೆಚ್ಚಿಸಲು ಖಚಿತ ಪಡಿಸಿಕೊಳ್ಳಲು ರಾಜ್ಯದ ಕೃಷಿ ಇಲಾಖೆಯನ್ನು ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ-OIಯ ಅನುಷ್ಠಾನಕ್ಕೆ ನೋಡಲ್ ಇಲಾಖೆಯನ್ನಾಗಿ ಮಾಡಲಾಗಿರುತ್ತದೆ. ಇದರ ಆಧಾರದ ಮೇಲೆ ಭಾರತ ಸರ್ಕಾರವು PMKSY ಯೋಜನೆಗೆ ಕಾರ್ಯಾಚರಣೆಯ ಮಾರ್ಗಸೂಚಿಗಳನ್ನು ರಚಿಸಿದ್ದು, ಕೇಂದ್ರ ಸರ್ಕಾರದ ನಿರ್ದೇಶನದಂತೆ ರಾಜ್ಯದಲ್ಲಿ PMKSY ಯೋಜನೆಯ ಅನುಷ್ಠಾನವನ್ನು ಪರಿವೀಕ್ಷಣೆ ಮಾಡುವ ಸಲುವಾಗಿ ರಾಜ್ಯ ಮಟ್ಟದಲ್ಲಿ ಮಂಜೂರಾತಿ ಸಮಿತಿ (SLSC), ಅಂತರ ಇಲಾಖೆಯ ಕಾರ್ಯಸಮೂಹ ಮತ್ತು ಜಿಲ್ಲಾ ಮಟ್ಟದ ಅನುಷ್ಠಾನ ಸಮಿತಿಯನ್ನು PMKSY ಯೋಜನೆಯಡಿ ರಚಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ:(4)ರನ್ವಯ ದಿನಾಂಕ: 25-05-2016ರಂದು ಮಾನ್ಯ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ-OI ಇತರೆ ಮಧ್ಯಸ್ಥಿಕೆಯ ಯೋಜನೆಗಳನ್ನು 7 ಜಿಲ್ಲೆಗಳ 18 ತಾಲ್ಲೂಕುಗಳಲ್ಲಿ ಅನುಷ್ಠಾನಗೊಳಿಸುವ ಪ್ರಸ್ತಾವನೆಗಳ ಕುರಿತು ಚರ್ಚಿಸಿದ್ದು, ಈ ತಾಲ್ಲೂಕುಗಳಲ್ಲಿ ಯೋಜನೆಯನ್ನು ಜಾರಿಗೊಳಿಸುವುದರ ಮೂಲಕ ಸಂಪೂರ್ಣ ಪರಿವರ್ತನೆಯನ್ನು ಜಲಸಂರಕ್ಷಣೆಯ ಕಾಮಗಾರಿಗಳ ಅನುಷ್ಠಾನದ ಮೂಲಕ ಸಾಧಿಸಬಹುದಾಗಿರುತ್ತದೆ ಎಂದು ತಿಳಿಸಿ ಸಮಗ್ರವಾದ ಯೋಜನೆಯನ್ನು ಒದಗಿಸುವಂತೆ ಸೂಚಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ:(5)ರನ್ವಯ ದಿನಾಂಕ: 27-05-2016ರಂದು ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು ಕರ್ನಾಟಕ ಸರ್ಕಾರ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ರಾಜ್ಯದ 7 ಜಿಲ್ಲೆಗಳ 18 ತಾಲ್ಲೂಕುಗಳಲ್ಲಿ ಪ್ರತಿ ತಾಲ್ಲೂಕಿನವರು ನೀರಿನ ಸಂರಕ್ಷಣಾ ಮತ್ತು ಅಂತರ್‌ಜಲವನ್ನು ಹೆಚ್ಚಿಸುವ ಕಾಮಗಾರಿಗಳ ಯೋಜನೆಯನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಘಟಕಗಳು ಒಳಗೊಂಡಂತೆ ಕ್ರಮವಾಗಿ ಕನಿಷ್ಠ ಶೇಕಡಾ 18 ಮತ್ತು 9ರಂತೆ ತಯಾರಿಸಿ ಕಳುಹಿಸುವಂತೆ ಸೂಚಿಸಲಾಯಿತು ಹಾಗೂ SCP ಮತ್ತು TSP ಅಡಿಯಲ್ಲಿ ವೈಯಕ್ತಿಕ ಕಾಮಗಾರಿಗಳಿಗೆ ಹೆಚ್ಚಿನ ಆದ್ಯತೆ ನೀಡಲು ಸಹ ಸೂಚಿಸಲಾಯಿತು. ಸದರಿ ಕಾಮಗಾರಿಗಳಲ್ಲಿ GIS MAPಗಳನ್ನು ಮತ್ತು ಕರ್ನಾಟಕ ರಾಜ್ಯ ದೂರ ಸಂವೇದಿ ಅನ್ವಯ ಕೇಂದ್ರದವರ ಮಾಹಿತಿಯನ್ನು ಆಧಾರಿಸಿ ನೀರು ಸಂರಕ್ಷಣಾ ಮತ್ತು ಅಂತರ್‌ಜಲ ಹೆಚ್ಚಿಸುವ ಕಾಮಗಾರಿಗಳು ಮತ್ತು ಅವುಗಳ ಸ್ಥಳಗಳನ್ನು ಗುರುತಿಸಿ ಇತ್ಯಾದಿ ಇವುಗಳನ್ನು ನಿರ್ಧರಿಸಲು ಬಳಸುವಂತೆ ಸೂಚಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ:(6)ರನ್ವಯ ದಿನಾಂಕ: 31-05-2016ರಂದು ಮಾನ್ಯ ಅಪರ ಮುಖ್ಯಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು ಕರ್ನಾಟಕ ಸರ್ಕಾರ ಇವರ ಅಧ್ಯಕ್ಷತೆಯಲ್ಲಿ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ-01ಗೆ ಕುರಿತಂತೆ ಕ್ರಿಯಾ ಯೋಜನೆ ತಯಾರಿಸುವ ಬಗ್ಗೆ ನಡೆದ ಸಭೆಯಲ್ಲಿ ಕ್ರಿಯಾ ಯೋಜನೆಗಳನ್ನು ಷರತ್ತು ಬದ್ಧ ಅನುಮೋದಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ:(7)ರನ್ವಯ ದಿನಾಂಕ: 21-06-2016ರಂದು ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ-OIಯ ಅನುಷ್ಠಾನಕ್ಕೆ ಕುರಿತಂತೆ ಮಾನ್ಯ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ರಾಜ್ಯ ಮಟ್ಟದ ಮಂಜೂರಾತಿ ಸಮಿತಿಯ ಸಭೆಯಲ್ಲಿ ಜಿಲ್ಲಾವಾರು ಕ್ರಿಯಾ ಯೋಜನೆಗಳಿಗೆ ಅನುಮೋದನೆ ನೀಡಿ ಜಲ ಸಂರಕ್ಷಣಾ ಕಾಮಗಾರಿಗಳನ್ನು ತೆಗೆದುಕೊಳ್ಳಲು ಹೆಚ್ಚು ಒತ್ತು ಕೊಡುವಂತೆ ನಿರ್ದೇಶಿಸಲಾಗಿದೆ. ತದನಂತರ ಕೃಷಿ ಹೊಂಡಗಳಲ್ಲಿ ಯಂತ್ರೋಪಕರಣಗಳನ್ನು ಬಳಸುವ ಘಟಕವಿರುವುದರಿಂದ ಅಂತಹ ಕಾಮಗಾರಿಗಳನ್ನು

ತೆಗೆದುಕೊಳ್ಳಲು ಕೃಷಿ ಇಲಾಖೆಗೆ ಅನುದಾನವನ್ನು ನೀಡುವಂತೆ ನಿರ್ದೇಶಿಸಿದ್ದು ಸದರಿ ಕಾಮಗಾರಿಗಳ ಅನುಷ್ಠಾನದ ಪರಿವೀಕ್ಷಣೆಯನ್ನು ಜಿಲ್ಲಾ ಮಟ್ಟದ ಅನುಷ್ಠಾನ ಸಮಿತಿಯು ತೆಗೆದುಕೊಳ್ಳತಕ್ಕದ್ದು ಮತ್ತು ಕಾಮಗಾರಿಗಳನ್ನು ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ-01ಗೆ ಕೇಂದ್ರ ಸರ್ಕಾರವು ಬಿಡುಗಡೆ ಮಾಡಿರುವ ಅನುದಾನದ ಪರಿಮಿತಿಯಲ್ಲಿಯೇ ಕೈಗೊಳ್ಳತಕ್ಕದ್ದು ಎಂದು ನಿರ್ದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ:(8)ರನ್ವಯ ದಿನಾಂಕ: 24-08-2016ರಂದು ಸರ್ಕಾರದ ಕಾರ್ಯದರ್ಶಿಗಳು ಕೃಷಿ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಸದರಿ ಯೋಜನೆಯ ಅನುಷ್ಠಾನಕ್ಕೆ ಕುರಿತಂತೆ ನಡೆದ ಸಭೆಯಲ್ಲಿ 7 ಜಿಲ್ಲೆಗಳ 18 ತಾಲ್ಲೂಕುಗಳಲ್ಲಿ 647 ಬಹುಕಮಾನಿನ ಚೆಕ್ ಡ್ಯಾಂ (Multi Arch Check Dam) ಕಾಮಗಾರಿಗಳನ್ನು ರೂ. 2,305.49 ಲಕ್ಷಗಳಲ್ಲಿ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ/ಗ್ರಾಮ ಪಂಚಾಯತಿಗಳ ಮೂಲಕ ನಿರ್ಮಿಸುವಂತೆ ನಿರ್ಧರಿಸಲಾಗಿರುತ್ತದೆ. ಉಳಿದಂತೆ ನೀರು ಸಂರಕ್ಷಣಾ ಕೃಷಿ ಹೊಂಡಗಳ ಕಾಮಗಾರಿಗಳನ್ನು ರೂ. 12,174.51 ಲಕ್ಷಗಳ ಅನುದಾನದಲ್ಲಿ ಕೃಷಿ ಇಲಾಖೆ ಮೂಲಕ ಅನುಷ್ಠಾನಗೊಳಿಸಲು ಮತ್ತು ಇದಕ್ಕೆ ಸಂಬಂಧಿಸಿದಂತೆ ಅನುದಾನವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ನರೇಗಾ ಯೋಜನೆಯ ಅನುದಾನದಿಂದ ಆಯುಕ್ತರು, ಜಲಾನಯನ ಅಭಿವೃದ್ಧಿ, ಕೃಷಿ ಇಲಾಖೆಗೆ ಬಿಡುಗಡೆ ಮಾಡಲು ನಿರ್ಧರಿಸಲಾಗಿದೆ. ಈ ಎಲ್ಲಾ ಕಾಮಗಾರಿಗಳನ್ನು ಕೇಂದ್ರ ಸರ್ಕಾರದ ನಿರ್ದೇಶನದಂತೆ ಹಾಗೂ ಯೋಜನೆಯ ಮಾರ್ಗಸೂಚಿಗಳಂತೆ ಅನುಷ್ಠಾನಿಸಲು ಅಗತ್ಯತೆ ಇರುವುದರಿಂದ ಸರ್ಕಾರವು ಆದೇಶವನ್ನು ಹೊರಡಿಸಲು ತೀರ್ಮಾನಿಸಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ.

***<u>ಸರ್ಕಾರದ ಆದೇಶದ ಸಂಖ್ಯೆ: ಗ್ರಾಅಪ 504 ಉಖಾಯೋ 2015, ಬೆಂಗಳೂರು ದಿನಾಂಕ: 03-10-2016</u>***

ಪ್ರಸ್ತಾವನೆಯಲ್ಲಿ ವಿವರಿಸಿದಂತೆ, 2016-17ನೇ ಸಾಲಿನಲ್ಲಿ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ-OI ಯಡಿ ನೀರು ಸಂರಕ್ಷಣಾ ಕೃಷಿ ಹೊಂಡ ಕಾಮಗಾರಿಗಳ ಅನುಷ್ಠಾನಕ್ಕೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಬಿಡುಗಡೆ ಮಾಡಿರುವ ಒಟ್ಟು ರೂ. 14,480/- ಲಕ್ಷಗಳ ಅನುದಾನದಲ್ಲಿ ಕೃಷಿ ಇಲಾಖೆಯ ಸುಪರ್ದಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಗ್ರಾಮೀಣಾಭಿವೃದ್ಧಿ ಆಯುಕ್ತಾಲಯದ ರಾಜ್ಯ ಉದ್ಯೋಗ ಖಾತರಿ ನಿಧಿಯಿಂದ ರೂ. 12174.51 ಲಕ್ಷಗಳನ್ನು ನೀಡಲಾಗಿದೆ. ಉಳಿದ ರೂ. 2305.49 ಲಕ್ಷಗಳನ್ನು ಬಹುಕಮಾನಿನ ಚೆಕ್ ಡ್ಯಾಂ ಕಾಮಗಾರಿಗಳ ಅನುಷ್ಠಾನಕ್ಕಾಗಿ ನರೇಗಾ ಯೋಜನೆಯೊಂದಿಗೆ ಒಗ್ಗೂಡಿಸಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ/ಗ್ರಾಮ ಪಂಚಾಯತಿಗಳ ಮೂಲಕ ಅನುಷ್ಠಾನಗೊಳಿಸಲು ಹಾಗೂ ಸದರಿ ವೆಚ್ಚವನ್ನು ರಾಜ್ಯದ e-FMS ಮೂಲಕ ಸಂದಾಯ ಮಾಡಲು ಆದೇಶಿಸಿದೆ.

ಆದೇಶದಲ್ಲಿ ಬಿಡುಗಡೆ ಮಾಡಿದ ಅನುದಾನವು ಈ ಕೆಳಕಂಡ ಷರತ್ತುಗಳ ಅನುಪಾಲನೆಗೆ ಒಳಪಟ್ಟಿರುತ್ತದೆ.

**ಷರತ್ತುಗಳು:**

1. ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ-OI ಯೋಜನೆಗೆ ಕೇಂದ್ರ ಸರ್ಕಾರದ ಕೃಷಿ, ಸಹಕಾರ ಮತ್ತು ರೈತರ ಕಲ್ಯಾಣ ಇಲಾಖೆಯವರು ಹೊರಡಿಸಿರುವ ಮಾರ್ಗಸೂಚಿಗಳಲ್ಲಿ ಮತ್ತು ಮಹಾತ್ಮ ಗಾಂಧಿ ನರೇಗಾ ಯೋಜನೆಯ ಕಾರ್ಯಾಚರಣೆಯ ಮಾರ್ಗಸೂಚಿಗಳಲ್ಲಿ ನಿಗಧಿ ಪಡಿಸಿದ ದರಸೂಚಿಗಳು, ನೆರವಿನ ಮಾದರಿ ಮತ್ತು ಇತರೆ ವಿಧಿವಿಧಾನಗಳಿಗೆ ರಾಜ್ಯ ಸರ್ಕಾರವು ಮತ್ತು ಯೋಜನೆಯ ಅನುಷ್ಠಾನದ ಸಂಸ್ಥೆಯವರು ಬದ್ಧರಾಗಿರತಕ್ಕದ್ದು.
2. ನಿಗಧಿಪಡಿಸಿದ ಗುರಿಗಳನ್ನು ಸಾಧಿಸಲು ಒಟ್ಟು ಮೊತ್ತದ ಸಂಖ್ಯೆಯಲ್ಲಿರುವ ಫಲಾನುಭವಿಗಳಲ್ಲಿ ಅನುಷ್ಠಾನ ಸಂಸ್ಥೆಯವರು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರಿಗಾಗಿ ಬಿಡುಗಡೆಯಾದ ಸಹಾಯಾನುದಾನದಲ್ಲಿ ಖರ್ಚನ್ನು ಭರಿಸುವುದು. ತಿಂಗಳಿನ ಆಧಾರದ ಮೇಲೆ ಅನುಷ್ಠಾನ ಸಂಸ್ಥೆಯವರು ಇದನ್ನು ತಪ್ಪದೇ ವರದೀಕರಿಸುವುದು.

3. ಅನುಷ್ಠಾನಗೊಳಿಸಿದ ಎಲ್ಲಾ e-FMS ವ್ಯವಸ್ಥೆಯ ಪ್ರದೇಶಗಳಲ್ಲಿ ಅನುದಾನವನ್ನು ರಾಜ್ಯಮಟ್ಟದಲ್ಲಿ ನಿರ್ವಹಿಸುವುದು ಮತ್ತು ಇನ್ಯಾವುದೇ ಮಧ್ಯಂತರ ಸಂಸ್ಥೆಗಳಲ್ಲಿ ಅನುದಾನದ ಲೆಕ್ಕದ ಖಾತೆಗಳು ಇರಬಾರದು. ಗ್ರಾಮ ಪಂಚಾಯತಿ ಮತ್ತು ಬ್ಲಾಕ್ ಮಟ್ಟದಲ್ಲಿ ಸೃಜಿಸಲಾದ ಪಾವತಿ ಆದೇಶದ ಆಧಾರಿತ, ಈ ಪ್ರದೇಶಗಳಲ್ಲಿರುವ ಎಲ್ಲಾ ಸಂದಾಯಗಳು ರಾಜ್ಯ ನಿಧಿಯಿಂದ ನೇರವಾಗಿ ಉದ್ದೇಶಿತ ಲೆಕ್ಕಗಳ ಖಾತೆಗೆ ವರ್ಗಾವಣೆಗೆ ಕ್ರಮ ಕೈಗೊಳ್ಳುವುದು.

4. ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ-OI ಯೋಜನೆಯ ವ್ಯಾಪ್ತಿಯಡಿ ಬರುವ ಸಾಮಾನ್ಯ ವರ್ಗ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವರ್ಗದವರಿಗೆ ಅನುಕ್ರಮವಾಗಿ ಶೇಕಡಾ 75.90, ಶೇಕಡಾ 17.10 ಮತ್ತು ಶೇಕಡಾ 7 ರ ಪ್ರಮಾಣದಲ್ಲಿ ವೆಚ್ಚ ಮಾಡತಕ್ಕದ್ದು.

5. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ನರೇಗಾ ಯೋಜನೆಯ ನಿಧಿಯಿಂದ ಬಿಡುಗಡೆಯಾದ ಅನುದಾನಕ್ಕೆ ಜಲಾನಯನ ಅಭಿವೃದ್ಧಿ, ಕೃಷಿ ಇಲಾಖೆಯ ಆಯುಕ್ತರು ಬಳಕೆ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.

6. ಕೃಷಿ ಇಲಾಖೆಯಿಂದ ಅನುಷ್ಠಾನಗೊಳಿಸುವ ಕಾಮಗಾರಿಗಳಿಗೆ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ-OI ಯೋಜನೆಯ ಮಾರ್ಗಸೂಚಿಗಳನ್ನು ಹಾಗೂ ಜಲಾನಯನ ಅಭಿವೃದ್ಧಿ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಅನುಸರಿಸತಕ್ಕದ್ದು.

7. ಕೃಷಿ ಇಲಾಖೆಯಿಂದ ಅನುಷ್ಠಾನಿಸುವ ಕಾಮಗಾರಿಗಳಿಗೆ ಕೃಷಿ ಇಲಾಖೆಯ ಅಧಿಕಾರಿಗಳು ಅನುಷ್ಠಾನ ಇಲಾಖೆಯ ಅಧಿಕಾರಿಗಳಾಗಿರುತ್ತಾರೆ.

8. ರಾಜ್ಯ ಸರ್ಕಾರದ ಕೃಷಿ ಇಲಾಖೆಯು ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ-01 ಯೋಜನೆಯ ಅನುಷ್ಠಾನಕ್ಕೆ ನೋಡಲ್ ಇಲಾಖೆಯಾಗಿರುತ್ತದೆ. ಕಾಮಗಾರಿಗಳ ಪರಿಶೀಲನೆಗೆ, ಅನುಷ್ಠಾನ ಸಂಸ್ಥೆಗಳೊಂದಿಗೆ ಭೌತಿಕ ಮತ್ತು ಆರ್ಥಿಕ ಪ್ರಗತಿಗಳ ಕಾರ್ಯಕ್ಕೆ ಸಮನ್ವಯ ಸಾಧಿಸಲು ನೋಡಲ್ ಇಲಾಖೆಯಾಗಿ ಕಾರ್ಯನಿರ್ವಹಿಸುತ್ತದೆ.

9. ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ-OI ಯೋಜನೆಯನ್ನು ಅನುಷ್ಠಾನಗೊಳಿಸುವ ಸಮಯದಲ್ಲಿ ಸಂಸದ್ ಆದರ್ಶ್ ಗ್ರಾಮ ಯೋಜನೆಯಡಿ ಗುರುತಿಸಲಾದ ಗ್ರಾಮಗಳಿಗೆ ಆದ್ಯತೆ ನೀಡತಕ್ಕದ್ದು.

10. ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ-01 ಯೋಜನೆಯ ಅನುಷ್ಠಾನವನ್ನು ಜಿಲ್ಲಾ ಮಟ್ಟದ ಅನುಷ್ಠಾನ ಸಮಿತಿಯವರು ಪರಿವೀಕ್ಷಣೆ ಮಾಡುವುದು ಮತ್ತು ಕೇಂದ್ರ ಸರ್ಕಾರ ಸದರಿ ಯೋಜನೆಗೆ ಬಿಡುಗಡೆ ಮಾಡಿರುವ ಅನುದಾನದ ಪರಿಮಿತಿಯಲ್ಲೇ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುವುದು.

11. ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಅನುಷ್ಠಾನಗೊಳಿಸುವ ಕಾಮಗಾರಿಗಳಿಗೆ ನರೇಗಾ ಯೋಜನೆಯ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

12. ಅನುಷ್ಠಾನ ಮಾಡುವ ಎಲ್ಲಾ ಕಾಮಗಾರಿಗಳ ಪ್ರದೇಶಗಳಲ್ಲಿ ಅಳವಡಿಸುವ ನಾಮಫಲಕಗಳಲ್ಲಿ ಸದರಿ ಯೋಜನೆಯ (PMKSY-OI) ವಿವರಗಳನ್ನು ನಮೂದಿಸುವುದು ಮತ್ತು ಸದರಿ ಕಾಮಗಾರಿಗಳ ಪ್ರದೇಶದಲ್ಲಿ ಶಿಷ್ಟಾಚಾರದ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ

(ಸಿದ್ದೇಶ್ ಪೋಲಕೊಕಟ್ಟಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗೆ:

1. ಮಹಾಲೇಖಪಾಲರು, ಕರ್ನಾಟಕ ಸರ್ಕಾರ, ಬೆಂಗಳೂರು/ಧಾರವಾಡ
2. ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು

3. ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು
4. ರಾಜ್ಯದ ಜಿಲ್ಲಾ ಪಂಚಾಯತ್‌ಗಳ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಬಾಗಲಕೋಟೆ, ಬೆಂಗಳೂರು (ಗ್ರಾಮಾಂತರ), ಬೆಳಗಾವಿ, ಚಿಕ್ಕಬಳ್ಳಾಪುರ, ಗದಗ, ಕೋಲಾರ ಮತ್ತು ತುಮಕೂರು.
5. ಮುಖ್ಯ ಆರ್ಥಿಕ ಸಲಹೆಗಾರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
6. ರಾಜ್ಯದ 7 ಜಿಲ್ಲೆಗಳ ಸಂಬಂಧಿಸಿದ ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.

**ಪ್ರತಿಯನ್ನು:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಹಾಗೂ ಅಭಿವೃದ್ಧಿ ಆಯುಕ್ತರು, ಕರ್ನಾಟಕ ಸರ್ಕಾರ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳಿಗೆ
6. ಸರ್ಕಾರದ ಕಾರ್ಯದರ್ಶಿಗಳು, ಕೃಷಿ ಇಲಾಖೆ ಬಹುಮಹಡಿ ಕಟ್ಟಡ, ಬೆಂಗಳೂರು.
7. ಪ್ರಾದೇಶಿಕ ಆಯುಕ್ತರು ಬೆಂಗಳೂರು, ಮೈಸೂರು, ಗುಲ್ಬರ್ಗಾ, ಬೆಳಗಾಂ
8. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು
9. ಮುಖ್ಯ ಅಭಿಯಂತರರು ಪಂಚಾಯತ್ ರಾಜ್ ಇಂಜನಿಯರಿಂಗ್ ಇಲಾಖೆ, ಗ್ರಾಮೀಣ ಭವನ, ಆನಂದ್ ರಾವ್ ವೃತ, ಬೆಂಗಳೂರು.
10. ಆಯುಕ್ತರು, ಗ್ರಾಮೀಣಾಭಿವೃದ್ಧಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
11. ವಿಶೇಷ ಆಯುಕ್ತರು, ಎಮ್.ಜಿ.ಎನ್.ಆರ್.ಇ.ಜಿ.ಎ, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
12. ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
13. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಎಲ್ಲಾ ನಿರ್ದೇಶಕರುಗಳು
14. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು
15. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್, ಗ್ರಾಮೀಣಾಭಿವೃದ್ಧಿಯ ರಾಜ್ಯ ಸಂಸ್ಥೆ, ಲಲಿತಮಹಲ್ ರಸ್ತೆ, ಮೈಸೂರು
16. ಜಂಟಿ ನಿರ್ದೇಶಕರು ತೋಟಗಾರಿಕೆ/ತಾಂತ್ರಿಕ/ಆಡಳಿತ, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
17. ರಾಜ್ಯದ ಎಲ್ಲಾ ಜಿಲ್ಲೆಗಳ ಒಂಬುಡ್ಸ್‌ಮನ್‌ಗಳಿಗೆ
18. ವಿಶೇಷಾಧಿಕಾರಿ, ಗಣಕಕೋಶ, ಗ್ರಾಅಪ ಇಲಾಖೆ. ಇವರು ಇಲಾಖಾ ವೆಬ್ ಸೈಟ್‌ನಲ್ಲಿ ಅಳವಡಿಸಲು ಕೋರಿದೆ.
19. ಸಾರ್ವಜನಿಕ ಸಂಪರ್ಕಾಧಿಕಾರಿಗಳವರ ಮಾಹಿತಿಗಾಗಿ ಹಾಗೂ ಇದನ್ನು ಕರ್ನಾಟಕ ವಿಕಾಸದಲ್ಲಿ ಪ್ರಕಟಿಸಲು ಕೋರಿದೆ.
20. M/s Effia Technologies, ಅವರಿಗೆ www.end2endsolutions.comನಲ್ಲಿ ಪ್ರಕಟಿಸಲು/ಅಳವಡಿಸಲು ಕೋರಿದೆ.
21. ಹೆಚ್ಚಿನ ಪ್ರತಿಗಳು/ಮಹಾ ಕಡತಕ್ಕೆ